**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/1142/ಗ್ರಾಪಂಅ/2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 19-12-2016.

**ಸುತ್ತೋಲೆ**

**ವಿಷಯ:** ನಗದು ರಹಿತ ಹಣಕಾಸು ವಹಿವಾಟಿನ ಬಗ್ಗೆ ಅರಿವು ಮೂಡಿಸುವ ಬಗ್ಗೆ.

**ಉಲ್ಲೇಖ:** ಕಾರ್ಯದರ್ಶಿಗಳು, ಭಾರತ ಸರ್ಕಾರ, ಪಂಚಾಯತ್ ರಾಜ್ ಸಚಿವಾಲಯ ಇವರ ಪತ್ರ ಸಂಖ್ಯೆ D.O. No. M-11011/ 19/ 2016-CB (PL) , ದಿನಾಂಕ: 09.12.2016.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ ಭಾರತ ಸರ್ಕಾರ ದಿನಾಂಕ 08.11.2016 ರಂದು ರೂ. 1000 ಹಾಗೂ ರೂ. 500 ಮುಖಬೆಲೆಯ ನೋಟುಗಳನ್ನು ಹಿಂಪಡೆದಿರುವುದು ಸರಿಯಷ್ಟೆ. ಈ ಹಿನ್ನೆಲೆಯಲ್ಲಿ ದೇಶದಾದ್ಯಂತ ನಗದು ರಹಿತ ಹಣಕಾಸು ವ್ಯವಹಾರಗಳ ಉತ್ತೇಜನ ನೀಡಲು ಹಲವಾರು ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. ಈ ಬಗ್ಗೆ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಡಿ ಬರುವ ಎಲ್ಲಾ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಮತ್ತು ಗ್ರಾಮ ಪಂಚಾಯತಿಗಳ ಮಟ್ಟದಲ್ಲಿ ಗ್ರಾಮ ಸಭೆಗಳ ಮೂಲಕ ಸ್ವಸಹಾಯ ಸಂಘಗಳು, ಸಹಕಾರಿ ಸಂಘಗಳ ಪ್ರತಿನಿಧಿಗಳಿಗೆ ಹಾಗೂ ಶ್ರೀಸಾಮಾನ್ಯರಿಗೆ ಅರಿವು ಮೂಡಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲು ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿದೆ.(ಆದೇಶದ ಪ್ರತಿ ಲಗತ್ತಿಸಿದೆ) ಸದರಿ ಆದೇಶದನ್ವಯ ಈ ಕೆಳಕಂಡಂತೆ ಅರಿವು ಮೂಡಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲು ಸೂಚಿಸಲಾಗಿದೆ.

**ರಾಜ್ಯ ಮಟ್ಟ :**

| ದಿನಾಂಕ | ಕಾರ್ಯಕ್ರಮ/ಭಾಗವಹಿಸುವವರು | ಸ್ಥಳ | ವ್ಯವಸ್ಥೆ |
|---|---|---|---|
| 24.12.2016 | **ತರಬೇತುದಾರರ ತರಬೇತಿಯನ್ನು ಏರ್ಪಡಿಸುವುದು.**<br>ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು, ಸಂಪನ್ಮೂಲ ವ್ಯಕ್ತಿಗಳು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಂಸ್ಥೆ ಹಾಗೂ ಎಸ್.ಎಲ್.ಬಿ.ಸಿ. ಬ್ಯಾಂಕ್ ಪ್ರತಿನಿಧಿಗಳು. | ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಂಸ್ಥೆ, ಮೈಸೂರು. | ನಿರ್ದೇಶಕರು, ಅಬ್ದುಲ್ ನಜೀಲ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಂಸ್ಥೆ. |

**ಜಿಲ್ಲಾ ಮಟ್ಟ :**

| ದಿನಾಂಕ | ಕಾರ್ಯಕ್ರಮ/ಭಾಗವಹಿಸುವವರು | ಸ್ಥಳ | ವ್ಯವಸ್ಥೆ |
|---|---|---|---|
| 26.12.2016 | **ತರಬೇತಿ**<br>ಜಿಲ್ಲಾ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು, ಎಲ್ಲಾ ಸದಸ್ಯರುಗಳು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಉಪ ಕಾರ್ಯದರ್ಶಿಗಳು, ಯೋಜನಾ ನಿರ್ದೇಶಕರು, ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಯೋಜನಾಧಿಕಾರಿಗಳು, ಇತರೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇತರೆ ಲೀಡ್ ಬ್ಯಾಂಕ್ ವ್ಯವಸ್ಥಾಪಕರು. | ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಸಭಾಂಗಣ/ಸೂಕ್ತವಾದ ಇತರ ಸ್ಥಳಗಳು | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್. |

ತಾಲ್ಲೂಕು ಮಟ್ಟ :

| ದಿನಾಂಕ | ಕಾರ್ಯಕ್ರಮ/ಭಾಗವಹಿಸುವವರು | ಸ್ಥಳ | ವ್ಯವಸ್ಥೆ |
|---|---|---|---|
| 27.12.2016 | **ಸ್ಯಾಟ್ ಕಾಂ ಮುಖಾಂತರ ತರಬೇತಿ** ಎಲ್ಲಾ ತಾಲ್ಲೂಕು ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು, ಎಲ್ಲಾ ಸದಸ್ಯರು, ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಎಲ್ಲಾ ಬ್ಯಾಂಕ್‌ಗಳ ವ್ಯವಸ್ಥಾಪಕರುಗಳು. | ಸಂಬಂಧಿಸಿದ ತಾಲ್ಲೂಕು ಪಂಚಾಯತ್ ಸ್ಯಾಟ್ ಕಾಂ ಕೇಂದ್ರ | ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್. |
| 28.12.2016 | **ಸ್ಯಾಟ್ ಕಾಂ ಮುಖಾಂತರ ತರಬೇತಿ** ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯತಿ ಅಧ್ಯಕ್ಷರು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಎಲ್ಲಾ ಬ್ಯಾಂಕ್‌ಗಳ ವ್ಯವಸ್ಥಾಪಕರುಗಳು. | ಸಂಬಂಧಿಸಿದ ತಾಲ್ಲೂಕು ಪಂಚಾಯತ್ ಸ್ಯಾಟ್ ಕಾಂ ಕೇಂದ್ರ | ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್. |

ಗ್ರಾಮ ಮಟ್ಟ :

| ದಿನಾಂಕ | ಕಾರ್ಯಕ್ರಮ/ಭಾಗವಹಿಸುವವರು | ಸ್ಥಳ | ವ್ಯವಸ್ಥೆ |
|---|---|---|---|
| ಮೊದಲನೇ ವಾರ ಜನವರಿ 2017 | **ಗ್ರಾಮ ಸಭೆಗಳನ್ನು ಏರ್ಪಡಿಸುವುದರ ಮೂಲಕ** ಗ್ರಾಮ ಸಭೆಗೆ ಈ ಕೆಳಕಂಡ ಸದಸ್ಯರುಗಳಿಗೆ ಭಾಗವಹಿಸಲು ವ್ಯಾಪಕ ಪ್ರಚಾರ ನೀಡುವುದು ಗ್ರಾಮ ಪಂಚಾಯತಿಯ ಸದಸ್ಯರುಗಳು, ಸ್ವಸಹಾಯ ಸಂಘದ ಸದಸ್ಯರು, ಸರ್ಕಾರೇತರ ಸಂಸ್ಥೆಗಳ ಸದಸ್ಯರು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಸದಸ್ಯರು, ಹಾಲು ಉತ್ಪಾದಕರ ಸಂಘದ ಸದಸ್ಯರು, ಇತರೆ ಸಹಕಾರ ಸಂಘಗಳ ಸದಸ್ಯರು, ಗ್ರಾಮ ಸಭೆಯ ಸದಸ್ಯರು, ಗ್ರಾಮ ಪಂಚಾಯತಿ ಮಟ್ಟದ ಅಧಿಕಾರಿಗಳು. | ಸಂಬಂಧಿಸಿದ ಗ್ರಾಮ ಪಂಚಾಯತ್‌ಗಳು ನಿರ್ಧರಿಸಿದ ಸ್ಥಳ | ಗ್ರಾಮ ಪಂಚಾಯತ್ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, |

ನಗದು ರಹಿತ ಹಣಕಾಸು ವಹಿವಾಟಿನ ಬಗ್ಗೆ ಅರಿವು ಮೂಡಿಸುವ ಈ ಕಾರ್ಯಕ್ರಮಗಳಿಗೆ ವ್ಯಾಪಕ ಪ್ರಚಾರ ನೀಡಿ ಪ್ರತಿ ಜಿಲ್ಲಾ ಪಂಚಾಯತಿಯಲ್ಲಿ ಮೇಲುಸ್ತುವಾರಿ ಮಾಡಲು ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಿ ಸದರಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಆದೇಶದಲ್ಲಿ ತಿಳಿಸಿರುವ ನಮೂನೆಯಲ್ಲಿ ಸರ್ಕಾರಕ್ಕೆ ವರದಿ ನೀಡಲು ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಕೋರಲಾಗಿದೆ.

ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಂಸ್ಥೆ ಇವರು ತಮ್ಮ ವತಿಯಿಂದ ಏರ್ಪಡಿಸುವ ತರಬೇತಿ ಕಾರ್ಯಕ್ರಮಗಳಿಗೆ ಗ್ರಾಮ ಪಂಚಾಯತಿಗಳ ಸದಸ್ಯರುಗಳಿಗೆ ತರಬೇತಿ ನೀಡಲು ಬಿಡುಗಡೆ ಮಾಡಿರುವ ಅನುದಾನದಲ್ಲಿ ನಿಯಮಾನುಸಾರ ವೆಚ್ಚ ಭರಿಸಲು ತಿಳಿಸಿದೆ.

ರಾಜ್ಯ ಮಟ್ಟದ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಂಸ್ಥೆಯಲ್ಲಿ ತರಬೇತುದಾರರ ತರಬೇತಿಯಲ್ಲಿ ಭಾಗವಹಿಸುವ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು ಜಿಲ್ಲೆಯೊಳಗೆ ಜಿಲ್ಲೆ/ತಾಲ್ಲೂಕು/ಗ್ರಾಮ ಮಟ್ಟದಲ್ಲಿ ತರಬೇತಿ ಕಾರ್ಯಕ್ರಮಗಳಲ್ಲಿ ಮುಖ್ಯ ತರಬೇತಿದಾರರಾಗಿ ಕಾರ್ಯನಿರ್ವಹಿಸಿ ಯೋಜನೆಯನ್ನು ಯಶಸ್ವಿಗೊಳಿಸುವುದು.

(ಎಂ. ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿಗಳು.
2. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಗಳು,
3. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಯವರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರು.
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
5. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ.
6. ಗಣಕ ಕೋಶ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.